ಸಾಕ್ಷಿಯನ್ನು ದಿನಾಂಕ 21.08.2024 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಪಾಟೀಸವಾಲುಃ 7 ಆರೋಪಿ ಪರ ಶ್ರೀ.ಕೆ.ಎನ್.ಎಲ್. ವಕೀಲರಿಂದ :**

7 ನೇ ಆರೋಪಿಯು ನನಗೆ ಸುಮಾರು ವರ್ಷಗಳಿಂದ ಪರಿಚಯ ಇರುತ್ತಾರೆ ಎಂದರೆ ಸರಿ. 7 ನೇ ಆರೋಪಿಯು ನನಗೆ ಕರೆ ಮಾಡಿ ಕಿಬ್ಬನಹಳ್ಳಿ ಕ್ರಾಸ್ ಹತ್ತಿರ ಕರೆಸಿರುವುದಿಲ್ಲ ಎಂದರೆ ಸರಿ. 7 ನೇ ಆರೋಪಿಯು ನನಗೆ ಜಾತಿ ನಿಂದನೆ ಮಾಡಿರುವುದಿಲ್ಲ ಎಂದರೆ ಸರಿ. 7 ನೇ ಆರೋಪಿಯು ನನ್ನ ಮೇಲೆ ಹಲ್ಲೆ ಮಾಡಿರುವುದಿಲ್ಲ ಎಂದರೆ ಸಾಕ್ಷಿಯು ಘಟನಾ ಸಮಯದಲ್ಲಿ 7 ನೇ ಆರೋಪಿಯು ಸ್ಥಳದಲ್ಲಿರಲಿಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣಕ್ಕೂ ಮತ್ತು 7 ನೇ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸಾಕ್ಷಿಯು 7 ನೇ ಆರೋಪಿಯು 1 ಮತ್ತು 2 ನೇ ಆರೋಪಿಗಳಿಗೆ ನನ್ನಿಂದ ಹಣವನ್ನು ಕೊಡಿಸಿರುತ್ತಾರೆಂದು ನುಡಿಯುತ್ತಾರೆ. 7 ನೇ ಆರೋಪಿಯ ಮೇಲೆ ಸುಳ್ಳು ದೂರನ್ನು ನೀಡಿದ್ದೇನೆ ಎಂದರೆ ಸರಿಯಲ್ಲ.

(1 ರಿಂದ 6 ನೇ ಆರೋಪಿತರ ಪರ ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ. ಆದ್ದರಿಂದ, ಪಾಟೀಸವಾಲನ್ನು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ